# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 492 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20/02/2023 |
| ಉತ್ತರಿಸುವ ಸಚಿವರು | : | ಪ್ರವಾಸೋದ್ಯಮ, ಜೀವಿಶಾಸ್ತ್ರ, ಹಾಗೂ ಪರಿಸರ ಸಚಿವರು |

*****

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳು ಪ್ರವಾಸಿ ಕೇಂದ್ರಗಳಾಗಿದ್ದು, ಪ್ರವಾಸಿಗರನ್ನು ಸೆಳೆಯಲು ಸರ್ಕಾರ ಕೈಗೊಂಡ ಕ್ರಮಗಳೇನು; | ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳ ಪ್ರವಾಸಿತಾಣಗಳ ಬಳಿ ಪ್ರವಾಸಿಗರ ಅನುಕೂಲಕ್ಕಾಗಿ ಯಾತ್ರಿನಿವಾಸ/ಡಾರ್ಮಿಟರಿ, ಕೂಡು ರಸ್ತೆ ಅಭಿವೃದ್ಧಿ, ಕುಡಿಯುವ ನೀರಿನ ಸೌಲಭ್ಯ, ಶೌಚಾಲಯ ನಿರ್ಮಾಣ ಮುಂತಾದ ಮೂಲಭೂತ ಸೌಲಭ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಇದಲ್ಲದೆ ಪ್ರವಾಸಿಗರನ್ನು ಆಕರ್ಷಿಸಲು ಈ ಕೆಳಕಂಡ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ.<br><br>**<u>ವಿಜಯಪುರ ಜಿಲ್ಲೆ :-</u>**<br><br>• ವಿಜಯಪುರ ಜಿಲ್ಲೆಯ ಭೂತನಾಳ ಕೆರೆಯ ಪ್ರದೇಶದಲ್ಲಿ ರೂ.16.36 ಕೋಟಿಗಳ ಅಂದಾಜು ವೆಚ್ಚದಲ್ಲಿ 57 ಕೊಠಡಿಗಳ ತ್ರಿಸ್ಟಾರ್ ಹೋಟೆಲ್ ಕಾಮಗಾರಿ ಕೈಗೊಂಡಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.<br>• ಪ್ರವಾಸಿ ಬ್ರೋಚರ್ಸ್ (ಇಂಗ್ಲೀಷ್ ಮತ್ತು ಕನ್ನಡ) ಮುದ್ರಿಸಿ ಪ್ರಚಾರ ಕಾರ್ಯ ಕೈಗೊಳ್ಳಲಾಗಿದೆ.<br>• ವಿಜಯಪುರ ಜಿಲ್ಲೆಯ ಪ್ರಮುಖ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿ ಬದಿಯಲ್ಲಿ ಜಿಲ್ಲೆಯ ಪ್ರವಾಸಿ ತಾಣಗಳ ಆಕರ್ಷಕ ಛಾಯಾಚಿತ್ರಗಳನ್ನು ಹೊಂದಿರುವ ಹೋರ್ಡಿಂಗ್ಸ್ ಮತ್ತು ಸೈನೇಜ್‌ಗಳನ್ನು ಅಳವಡಿಸಲಾಗಿದೆ.<br>• ವಿಜಯಪುರ ಜಿಲ್ಲೆಯ ಪ್ರಮುಖ ಪ್ರವಾಸಿ ಕೇಂದ್ರಗಳ ಸಂಕ್ಷಿಪ್ತ ಮಾಹಿತಿವುಳ್ಳ 'ಪ್ರೋಮೋ ವೀಡಿಯೋ' ತಯಾರಿಸಿ ಸಾಮಾಜಿಕ ತಾಣಗಳ ಮೂಲಕ ಪ್ರಚುರಪಡಿಸಲಾಗಿದೆ.<br><br>**<u>ಬಾಗಲಕೋಟೆ ಜಿಲ್ಲೆ :-</u>**<br><br>• ಬಾಗಲಕೋಟೆ ಜಿಲ್ಲೆಯ ಬಾದಾಮಿಯ ಚೋಳದಗುಡ್ಡ ಪ್ರದೇಶದ ಕನ್ನಡ ವಿಶ್ವವಿದ್ಯಾನಿಲಯದ ಆವರಣದಲ್ಲಿ ರೂ.17.67 ಕೋಟಿಗಳ ಅಂದಾಜು ವೆಚ್ಚದಲ್ಲಿ 75 ಕೊಠಡಿಗಳ ತ್ರಿಸ್ಟಾರ್ ಹೋಟೆಲ್ ನಿರ್ಮಾಣ ಕಾಮಗಾರಿ ಕೈಗೊಂಡಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.<br>• ಕಾಫಿ ಟೇಬಲ್ ಬುಕ್, ಪ್ರವಾಸಿ ಬ್ರೋಚರ್ಸ್ (ಇಂಗ್ಲೀಷ್ ಮತ್ತು ಕನ್ನಡ) ಮುದ್ರಿಸಿ ಪ್ರಚಾರ ಕಾರ್ಯ ಕೈಗೊಳ್ಳಲಾಗಿದೆ. |

| | | |
|---|---|---|
| | | • ಬಾಗಲಕೋಟೆ ಜಿಲ್ಲೆಯ ಪ್ರಮುಖ ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿ ಬದಿಯಲ್ಲಿ ಜಿಲ್ಲೆಯ ಪ್ರವಾಸಿತಾಣಗಳ ಆಕರ್ಷಕ ಛಾಯಾಚಿತ್ರಗಳನ್ನು ಹೊಂದಿರುವ ಹೋರ್ಡಿಂಗ್ಸ್ ಮತ್ತು ಸೈನೇಜ್‌ಗಳನ್ನು ಅಳವಡಿಸಲಾಗಿದೆ.<br>• ಬಾಗಲಕೋಟೆ ಜಿಲ್ಲೆಯ ಪ್ರಮುಖ ಪ್ರವಾಸಿ ಕೇಂದ್ರಗಳ ಸಂಕ್ಷಿಪ್ತ ಮಾಹಿತಿವುಳ್ಳ' ಪ್ರೋಮೋ ವೀಡಿಯೋ' ತಯಾರಿಸಿ ಸಾಮಾಜಿಕ ತಾಣಗಳ ಮೂಲಕ ಪ್ರಚುರಪಡಿಸಲಾಗಿದೆ. |
| ಆ) | ವಿವಿಧ ರಾಜ್ಯಗಳು ಮತ್ತು ವಿದೇಶದಿಂದ ಬರುವ ಪ್ರವಾಸಿಗರ ವಾಸ್ತವ್ಯದ ಅನುಕೂಲಕ್ಕಾಗಿ ಯಾತ್ರಿನಿವಾಸಗಳಲ್ಲಿ ಹೆಚ್ಚುವರಿ ಕೊಠಡಿಗಳನ್ನು ನಿರ್ಮಾಣ ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ: ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | ಯಾತ್ರಿನಿವಾಸಗಳಲ್ಲಿ ಹೆಚ್ಚುವರಿ ಕೊಠಡಿಗಳನ್ನು ನಿರ್ಮಾಣ ಮಾಡುವ ಚಿಂತನೆ ಸರ್ಕಾರದ ಮುಂದಿರುವುದಿಲ್ಲ. |
| ಇ) | ವಿಜಯಪುರ, ಬಾಗಲಕೋಟೆ, ಬೆಳಗಾವಿ ಜಿಲ್ಲೆಗಳಲ್ಲಿರುವ ಸ್ಮಾರಕ ಇತ್ಯಾದಿಗಳನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಇವುಗಳ ಅಭಿವೃದ್ಧಿಗೆ ಮೀಸಲಿಟ್ಟ ಅನುದಾನ ಎಷ್ಟು; ಖರ್ಚು ಮಾಡಿದ ಅನುದಾನ ಎಷ್ಟು:(ಸಂಪೂರ್ಣ ಮಾಹಿತಿ ನೀಡುವುದು) | ಇಲಾಖೆಯ ಅನುದಾನಕ್ಕನುಗುಣವಾಗಿ ಸ್ಮಾರಕಗಳ ಸಂರಕ್ಷಣೆಯನ್ನು ಕೈಗೊಳ್ಳಲಾಗುತ್ತಿದ್ದು, ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಕೈಗೊಂಡಿರುವ ಸ್ಮಾರಕಗಳ ಸಂರಕ್ಷಣೆಯ ವಿವರವನ್ನು ಅನುಬಂಧದಲ್ಲಿ ಒದಗಿಸಿದೆ. |
| ಈ) | ಬಾಗಲಕೋಟೆ ಜಿಲ್ಲೆಯ ಆಲಮಟ್ಟಿಯಲ್ಲಿ ಪಕ್ಷಿಧಾಮ ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ: ಇದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು: ಜಲಾಶಯದ ಸುತ್ತಮುತ್ತ ಅನೇಕ ಪಕ್ಷಿಗಳು ಬಂದು ತಾಣವಾಗಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಾಗಲಕೋಟೆ ಜಿಲ್ಲೆಯ ಆಲಮಟ್ಟಿಯಲ್ಲಿ ಪಕ್ಷಿಧಾಮ ಮಾಡುವ ಉದ್ದೇಶ ಸರ್ಕಾರದ ಮುಂದಿರುವುದಿಲ್ಲ. |

ಸಂಖ್ಯೆ: ಟಿಓಆರ್ 61 ಟಿಡಿವಿ 2023

(ಆನಂದ್ ಸಿಂಗ್)
ಪ್ರವಾಸೋದ್ಯಮ, ಜೀವಿಶಾಸ್ತ್ರ, ಹಾಗೂ
ಪರಿಸರ ಸಚಿವರು

**ಚುಕ್ಕೆ ಗುರುತಿನ ಪ್ರ ಸಂ: 492ಕ್ಕೆ ಅನುಬಂಧ**

| ಕ್ರಮ ಸಂಖ್ಯೆ | ಕಾಮಗಾರಿಯ ಹೆಸರು | ರೂ.ಲಕ್ಷಗಳಲ್ಲಿ ಅಂದಾಜು ಮೊತ್ತ | ರೂ.ಲಕ್ಷಗಳಲ್ಲಿ ಒಪ್ಪಿಕೊಂಡ ಮೊತ್ತ | ರೂ.ಲಕ್ಷಗಳಲ್ಲಿ ಈವರೆಗೆ ಖರ್ಚಾದ ಮೊತ್ತ | ಷರಾ |
|---|---|---|---|---|---|
| | **ಬೆಳಗಾವಿ ಜಿಲ್ಲೆ** | | | | |
| 1 | ಬೆಳಗಾವಿ ಜಿಲ್ಲೆ, ಅಥಣಿ ತಾಲ್ಲೂಕು ಸಂದಗಾವದಲ್ಲಿರುವ ಪುರಾತನ ದೇವಾಲಯದ ಸಂರಕ್ಷಣೆ ಹಾಗೂ ಕಾಂಪೌಂಡ್ ಗೋಡೆಯ ಕೆಲಸ. | 40.00 | 39.72 | 39.46 | ಕಾಮಗಾರಿ ಪೂರ್ಣಗೊಂಡಿದೆ. |
| 2 | ಬೆಳಗಾವಿ ಜಿಲ್ಲೆ, ಬೈಲಹೊಂಗಲ ಕಿತ್ತೂರು ರಾಣಿ ಚನ್ನಮ್ಮನ ಟೂಂಬ್ಸ್ ಗಳಿಗೆ ಕಲ್ಲುಹೊದಿಕೆ ಕಾಮಗಾರಿ. | 60.00 | 60.00 | 32.00 | ಕಾಮಗಾರಿ ಮುಕ್ತಾಯದ ಹಂತದಲ್ಲಿದೆ. |
| 3 | ಬೆಳಗಾವಿ ಜಿಲ್ಲೆ, ಕಿತ್ತೂರು ತಾಲ್ಲೂಕು, ಕಿತ್ತೂರಿನಲ್ಲಿರುವ ಸರ್ಕಾರಿ ವಸ್ತುಸಂಗ್ರಹಾಲಯದ ಹತ್ತಿರ ಹಾಗೂ ರಾಣಿ ಚನ್ನಮ್ಮ ರವರ ಅರಮನೆಯ ಹತ್ತಿರವಿರುವ ಉದ್ಯಾನವನ ನಿರ್ವಹಣಾ ಕಾಮಗಾರಿ | 5.00 | 4.80 | - | ಫೆಬ್ರುವರಿ 2023ರಲ್ಲಿ ಮಾಹೆಯಲ್ಲಿ ಪ್ರಾರಂಭಿಸಲಾಗಿದೆ. |
| 4 | ಬೆಳಗಾವಿ ಜಿಲ್ಲೆ, ಕಿತ್ತೂರು ತಾಲ್ಲೂಕು, ಅಥಣಿಯಲ್ಲಿರುವ ಸರ್ಕಾರಿ ವಸ್ತುಸಂಗ್ರಹಾಲಯ ದುರಸ್ಥಿ ಕೆಲಸ ಹಾಗೂ ಉದ್ಯಾನವನ ನಿರ್ವಹಣಾ ಕಾಮಗಾರಿ. | 2.50 | 2.50 | - | ಮೊದಲನೇ ಟೆಂಡರ್‌ಗೆ ಯಾವ ಗುತ್ತಿಗೆದಾರರು ಭಾಗವಹಿಸಿಲ್ಲವಾದ್ದರಿಂದ ಮರು ಟೆಂಡರ್ ಕರೆಯಲಾಗಿದೆ. |
| 5 | ಬೆಳಗಾವಿ ಜಿಲ್ಲೆ, ಕಿತ್ತೂರು ತಾಲ್ಲೂಕು, ಕಿತ್ತೂರಿನದಲ್ಲಿರುವ ಕೋಟೆ, ಅರಮನೆ ಅವಶೇಷಗಳ ವಸ್ತುಸಂಗ್ರಹಾಲಯ ಹಾಗೂ ಉದ್ಯಾನವನ ನಿರ್ವಹಣಾ ಕಾಮಗಾರಿ. | 2751.71 | - | - | ಅಭಿವೃದ್ಧಿ ಕಿತ್ತೂರು ಪ್ರಾಧಿಕಾರದ ಆದ್ಯಕ್ಷರಾದ ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:07.07.2022ರಂದು ನಡೆದ ಸಭೆಯಲ್ಲಿ ಡಿ.ಪಿ.ಆರ್ ಗೆ ಅನುಮೋದನೆ ನೀಡಿದ್ದು, ಕಂದಾಯ ಇಲಾಖೆಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಬೇಕಾಗಿದೆ. |

| ಕ್ರಮ ಸಂಖ್ಯೆ | ಕಾಮಗಾರಿಯ ಹಸರು | ರೂ.ಲಕ್ಷಗಳಲ್ಲಿ ಅಂದಾಜು ಮೊತ್ತ | ರೂ.ಲಕ್ಷಗಳಲ್ಲಿ ಒಪ್ಪಿಕೊಂಡ ಮೊತ್ತ | ರೂ.ಲಕ್ಷಗಳಲ್ಲಿ ಈವರಗೆ ಖರ್ಚಾದ ಮೊತ್ತ | ಷರಾ |
|---|---|---|---|---|---|
| | **ವಿಜಯಪುರ ಜಿಲ್ಲೆ** | | | | |
| 1 | ವಿಜಯಪುರ ಜಿಲ್ಲೆ, ಚಡಚಣ ತಾಲ್ಲೂಕು, ಚಡಚಣದಲ್ಲಿರುವ ಶ್ರೀ ಸಂಗಮೇಶ್ವರ ದೇವಾಲಯದ ಸಂರಕ್ಷಣೆ ಹಾಗೂ ಕಾಂಪೌಂಡ್ ಗೋಡೆ ಕೆಲಸ. | 99.00 | 95.00 | 35.00 | ಕಾಮಗಾರಿ ಪ್ರಗತಿಯಲ್ಲಿದೆ. |
| 2 | ವಿಜಯಪುರ ಜಿಲ್ಲೆ, ವಿಜಯಪುರದಲ್ಲಿರುವ ಆನಂದ ಮಹಲ್‌ನ ಸಂರಕ್ಷಣಾ ಕಾಮಗಾರಿ. | 500.00 | 485.00 | 440.00 | ಕಾಮಗಾರಿ ಮುಕ್ತಾಯದ ಹಂತದಲ್ಲಿದೆ. |
| 3 | ವಿಜಯಪುರ ಜಿಲ್ಲೆ, ವಿಜಯಪುರ ತಾಲ್ಲೂಕು ಬಿಜ್ಜರಗಿ ಗ್ರಾಮದಲ್ಲಿರುವ ಮಹಾದೇವ ದೇವಾಲಯದ ಸಂರಕ್ಷಣೆ ಕಾಮಗಾರಿ. | 98.75 | 98.75 | - | ಫೆಬ್ರುವರಿ 2023ರಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ. |
| 4 | ವಿಜಯಪುರ ಜಿಲ್ಲೆ, ಇಂಡಿ ತಾಲ್ಲೂಕು, ಹಿರೆಮಸಳಿ ಗ್ರಾಮದಲ್ಲಿರುವ ಶ್ರೀ ರೆಬ್ಬವ್ವ ದೇವಾಲಯದ ಅಭಿವೃದ್ಧಿ ಕಾಮಗಾರಿ. | 25.00 | 25.00 | - | ಫೆಬ್ರುವರಿ 2023ರಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ. |
| | **ಬಾಗಲಕೋಟೆ ಜಿಲ್ಲೆ** | | | | |
| 1 | ಬಾಗಲಕೋಟೆ ಜಿಲ್ಲೆ, ಬಾದಾಮಿ ತಾಲ್ಲೂಕು, ಬಾದಾಮಿಯಲ್ಲಿರುವ ಚಿಕ್ಕಮಹಾಕೂಟ ದೇವಾಲಯದ ಸಂರಕ್ಷಣಾ ಕಾಮಗಾರಿ. | 136.00 | 135.49 | - | ಫೆಬ್ರುವರಿ 2023ರಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ. |